**2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ**

**ಸತ್ರ ಮೊಕದ್ದಮೆ ಸಂಖ್ಯೆ: 8/2024**

ಪಿ.ಡಬ್ಲುಃ9 ಸಿಡಬ್ಲುಃ17

ಸಾಕ್ಷಿಯ ಹೆಸರು : ಮೂರ್ತಿ

ತಂದೆಯ ಹೆಸರು : ಬಸಪ್ಪ

ವಯಸ್ಸು : 49 ವರ್ಷ

ವೃತ್ತಿ : ಕೂಲಿ ಕೆಲಸ

ವಾಸಸ್ಥಳ : ಚಪ್ಪರದಹಳ್ಳಿ ಗ್ರಾಮ

ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ 04-12-2024

ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-

ನನಗೆ ಚಾಸಾ-18 ರವರ ಪರಿಚಯ ಇಲ್ಲ. ನಾನು ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಮೃತಳ ಸೀರೆ ಜಪ್ತು ಪಂಚನಾಮೆ ಆಗಿದೆ. ಸದರಿ ಪಂಚನಾಮೆಯನ್ನು ನಿಪಿ-9 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ನಿಪಿ-9 ರಂತೆ ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತು ಗಳನ್ನು ಜಪ್ತು ಮಾಡಿಕೊಂಡಿಲ್ಲ. ನ್ಯಾಯಾಲಯದ ಮುಂದೆ ನೋಡುತ್ತಿರುವ ಎರಡು ಸೀರೆಗಳನ್ನು, ರವಿಕೆ ಮತ್ತು ಲಂಗವನ್ನು ನಾನು ಈ ಮೊದಲು ನೋಡಿಲ್ಲ. ಈಗ ಸುಮಾರು 1 ವರ್ಷದ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ನನ್ನ ಸಹಿಯನ್ನು ನಿಪಿ-9 ರಲ್ಲಿ ತೆಗೆದುಕೊಂಡಿದ್ದರು. ನಿಪಿ-9 ರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀಸವಾಲು ಮಾಡಲು ಸ ಅ ರವರು ಪರವಾನಿಗೆ ಕೇಳುತ್ತಾರೆ. ಸ ಅ ರವರ ವಾದವನ್ನು ಕೇಳಿ ಸಾಕ್ಷಿಯ ಹೇಳಿಕೆಯನ್ನು ಹಾಗೂ ಮುಖ್ಯ ವಿಚಾರಣೆಯನ್ನು ಪರಿಶೀಲನೆ ಮಾಡಿ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪರವಾನಿಗೆ ಕೊಡಲಾಯಿತು).

<u>ಪಾಟೀಸವಾಲು ಮಾನ್ಯ ಸಾರ್ವಜನಿಕ ಅಭಿಯೋಜಕರಿಂದ:</u>

ದಿಃ **29-09-2023** ರಂದು ನನ್ನನ್ನು ಮತ್ತು ಚಾಸಾ-**19** ರವರನ್ನು ಪೊಲೀಸರು ಠಾಣೆಗೆ ಪಂಚರೆಂದು ಕರೆದಿದ್ದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-**22** ರವರು ನಮ್ಮ ಮುಂದೆ ಈಗ ನಾನು ನ್ಯಾಯಾಲಯದ ಮುಂದೆ ನೋಡುತ್ತಿರುವ ಮೃತಳ ಸೀರೆ, ಒಳಲಂಗ ಮತ್ತು ರವಿಕೆಯನ್ನು ಹಾಗೂ ಇನ್ನೊಂದು ಸೀರೆಯನ್ನು ಹಾಜರುಪಡಿಸಿದ್ದ ಎಂದರೆ ಸರಿಯಲ್ಲ. ಪೊಲೀಸರು ಸದರಿ ವಸ್ತುಗಳನ್ನು ನಮ್ಮ ಸಮಕ್ಷಮ ನನಗೆ ಈಗ ಓದಿ ಹೇಳಿದಂತೆ ನಿಪಿ-**9** ರಂತೆ ಮುಂಜಾನೆ **10-00** ಗಂಟೆಯಿಂದ **11-00** ಗಂಟೆವರೆಗೆ ಮಹಜರ್ ನ್ನು ಮಾಡಿ ಜಪ್ತು ಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ಸದರಿ ಮಹಜರ್ ಸಂಗತಿ ತಿಳಿದುಕೊಂಡು ನಾನು ಸಹಿ ಮಾಡಿದ್ದೆ ಎಂದರೆ ಸರಿಯಲ್ಲ. ಎಲ್ಲಾ ಸಂಗತಿಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲು ಆರೋಪಿ ಪರ ವಕೀಲರಿಂದಃ</u>

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

**2** ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.